ಅ) ಈ ಶಾಲೆಗಳಲ್ಲಿ ಒಟ್ಟು 171 ವಿದ್ಯಾರ್ಥಿಗಳು ಮತ್ತು 129 ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ: ಬಳ್ಳಾರಿಯ ಅಲ್ಲೀಪುರದ ನೀರು ಶೇಖರಣಾ ಟ್ಯಾಂಕ್‌ನಲ್ಲಿ ಬಿರುಕು ಬಿಟ್ಟಿರುವುದು.

1018 (1454)

ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಅಲ್ಲೀಪುರದ ನೀರು ಶೇಖರಣಾ ಟ್ಯಾಂಕ್‌ನಲ್ಲಿ ಬಿರುಕು ಬಿಟ್ಟಿರುವುದನ್ನು ರಿಪೇರಿ ಮಾಡಲಾಗಿದೆಯೇ?

ಆ) ಮಾಡಿದ್ದಲ್ಲಿ ಯಾವಾಗ ರಿಪೇರಿ ಮಾಡಲಾಯಿತು?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು):

ಅ) ರಿಪೇರಿಯನ್ನು ಮಾಡಲಾಗಿದೆ.

ಆ) 1997ರ ಅಕ್ಟೋಬರ್‌ನಲ್ಲಿ ರಿಪೇರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಯಿತು.

ವಿಷಯ: ಬಳ್ಳಾರಿಯಲ್ಲಿ ಖಾಸಗಿ ವಲಯದಲ್ಲಿ ವಿಮಾನ ನಿಲ್ದಾಣ ನಿರ್ಮಾಣ.

1019 (1453)

ಶ್ರೀ ಅಲ್ಲಮ್ ವೀರಭದ್ರಪ್ಪ (ಕುರಗೋಡು): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿಯಲ್ಲಿ ವಿಮಾನ ನಿಲ್ದಾಣವನ್ನು ನಿರ್ಮಿಸಲು ಖಾಸಗಿ ವಲಯಕ್ಕೆ ಸರ್ಕಾರ ಅನುಮತಿ ನೀಡಿದೆಯೇ?

ಆ) ಹಾಗಿದ್ದಲ್ಲಿ ಈ ಯೋಜನೆಯನ್ನು ಯಾರಿಗೆ ವಹಿಸಲಾಗಿದೆ?

ಇ) ಕೇಂದ್ರ ಸರ್ಕಾರವು ಖಾಸಗಿ ವಲಯದಲ್ಲಿ ಈ ವಿಮಾನ ನಿಲ್ದಾಣವನ್ನು

ನಿರ್ಮಿಸಲು ಅನುಮತಿ ನೀಡಲು ಮುಂದೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಕೇಂದ್ರ ಸರ್ಕಾರದೊಡನೆ ವ್ಯವಹರಿಸಿ ಈ ವಿಮಾನ ನಿಲ್ದಾಣವನ್ನು ಖಾಸಗಿ ವಲಯದಲ್ಲಿ ನಿರ್ಮಿಸಲು ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯಮಂತ್ರಿಗಳು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಹೌದು.

ಈ) ಹೌದು.

ವಿಷಯ: ಕುರಗೋಡುನಲ್ಲಿ ಮಿನಿವಿಧಾನಸೌಧ ಸ್ಥಾಪನೆ.

1020 (1449)

ಶ್ರೀ ಅಲ್ಲಮ್ ವೀರಭದ್ರಪ್ಪ (ಕುರಗೋಡು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ತಾಲ್ಲೂಕಿನ ಕುರುಗೋಡು ವಿಧಾನಸಭಾ ಕ್ಷೇತ್ರದಲ್ಲಿ ಮಿನಿ ವಿಧಾನ ಸೌಧವನ್ನು ನಿರ್ಮಿಸಲಾಗಿದೆಯೇ?

ಆ) ಇಲ್ಲದಿದ್ದಲ್ಲಿ, 1998-99ರಲ್ಲಿ ನಿರ್ಮಿಸಲು ಕ್ರಮವನ್ನು ಕೈಗೊಳ್ಳಲಾಗುವುದೇ?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ಇಲ್ಲ.

ಆ) ಇಲ್ಲ.

ವಿಷಯ: ಬಳ್ಳಾರಿ ಜಿಲ್ಲೆಯಲ್ಲಿ ಮಳೆ ಇಲ್ಲದೆ ಉಂಟಾಗಿರುವ ಹಾನಿ

1021 (1452)

ಶ್ರೀ ಅಲ್ಲಮ್ ವೀರಭದ್ರಪ್ಪ (ಕುರಗೋಡು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?